ಕರ್ನಾಟಕ ಸರ್ಕಾರ

ಸಂಖ್ಯೆ: ಆಕುಕ 155 ಪಿ&ಆರ್ 2020

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 20-08-2020

ಇವರಿಂದ:
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ,
ವಿಕಾಸ ಸೌಧ, ಬೆಂಗಳೂರು.

ಇವರಿಗೆ:
ಎಲ್ಲಾ ಜಿಲ್ಲೆಗಳ ಜಿಲ್ಲಾ ಆರೋಗ್ಯ
ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು.

ಮಾನ್ಯರೆ,

ವಿಷಯ:- ರಾಜ್ಯದ ಆಸ್ಪತ್ರೆಗಳಲ್ಲಿ ಶುಶ್ರೂಷಕರನ್ನು ಡಿ.ಎಂ.ಎಫ್. ವಂತಿಗೆ ಹಣದ ಲಭ್ಯತೆ ಮೇರೆಗೆ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳುವ ಬಗ್ಗೆ.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ರಾಜ್ಯದ ಜಿಲ್ಲಾ ಆಸ್ಪತ್ರೆಗಳಲ್ಲಿ ಆರೋಗ್ಯ ಸೇವೆ ಗುಣಮಟ್ಟವನ್ನು ಉತ್ತಮಪಡಿಸಲು ಶುಶ್ರೂಷಕರುಗಳನ್ನು ಡಿ.ಎಂ.ಎಫ್. ವಂತಿಗೆ ಹಣದ ಲಭ್ಯತೆ ಮೇರೆಗೆ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು ಪ್ರಸ್ತಾವನೆಗಳನ್ನು ಆಯಾ ಜಿಲ್ಲೆಯ ಜಿಲ್ಲಾ ಖನಿಜ ಪ್ರತಿಷ್ಠಾನ ಟ್ರಸ್ಟ್‌ಗೆ ನೀಡಲು ರಾಜ್ಯದ ಮುಖ್ಯ ಕಾರ್ಯದರ್ಶಿರವರ ಅಧ್ಯಕ್ಷತೆಯಲ್ಲಿ ದಿನಾಂಕ:16/05/2020 ರಂದು ನಡೆದ ಜಿಲ್ಲಾ ಖನಿಜ ಪ್ರತಿಷ್ಠಾನ ಟ್ರಸ್ಟ್‌ನ ರಾಜ್ಯಮಟ್ಟದ ಉನ್ನತಾಧಿಕಾರಸ್ತ ಸಮಿತಿ ಸಭೆಯಲ್ಲಿ ತೀರ್ಮಾನ ಕೈಗೊಳ್ಳಲಾಗಿದೆ.

ಆದ್ದರಿಂದ ತಮ್ಮ ಜಿಲ್ಲೆಗಳಲ್ಲಿನ ಜಿಲ್ಲಾ ಆಸ್ಪತ್ರೆಗಳಲ್ಲಿ ಆರೋಗ್ಯ ಸೇವೆ ಗುಣಮಟ್ಟವನ್ನು ಉತ್ತಮಪಡಿಸಲು ಶುಶ್ರೂಷಕರ (Staff Nurse) ಅಗತ್ಯವಿದ್ದಲ್ಲಿ ಡಿ.ಎಂ.ಎಫ್. ವಂತಿಗೆ ಹಣದ ಲಭ್ಯತೆ ಮೇರೆಗೆ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಬಹುದಾಗಿದೆ. ತಾವು ಆಯಾ ಜಿಲ್ಲೆಯ ಜಿಲ್ಲಾ ಖನಿಜ ಪ್ರತಿಷ್ಠಾನ ಟ್ರಸ್ಟ್‌ನ ಅಧಿಕಾರಿಗಳನ್ನು ಸಂಪರ್ಕಿಸಿ ಸೂಕ್ತ ಪ್ರಸ್ತಾವನೆಯನ್ನು ಸಲ್ಲಿಸಿ ಮುಂದಿನ ಅಗತ್ಯ ಕ್ರಮ ಕೈಗೊಳ್ಳುವಂತೆ ತಮ್ಮನ್ನು ಕೋರಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

(ಯ. ಶಿವಶಂಕರ್) 21/8/2020
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಸೇವೆಗಳು)

ಪ್ರತಿಯನ್ನು:
ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು –ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಿಗೆ ನಿರ್ದೇಶನ ನೀಡುವಂತೆ ಕೋರಿದೆ